155ನೇ 6 ನಿ=330= (86) 4RR 19/07/25

**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಶಶೀಲ್ ಜಿ. ನಮೋಶಿ ಇವರು ನಿಯಮ 330 ರಡಿ ಮಂಡಿಸಿರುವ ಸೂಚನೆಗೆ ಉತ್ತರ**

**ಸೂಚನೆ:**

ರಾಜ್ಯದ ತಾಲ್ಲೂಕುಗಳಲ್ಲಿ ತಹಶೀಲ್ದಾರ್ ಗ್ರೇಡ್-2 ಹುದ್ದೆ ಹೊಂದಿರುವ ಅಧಿಕಾರಿಗಳು ತಹಶೀಲ್ದಾರ್ ಗ್ರೇಡ್-1 ಆಗಿ ಕರ್ತವ್ಯ ನಿರ್ವಹಿಸುತ್ತಿದ್ದು, ಅವರಿಗೆ ತಮ್ಮದೇ ಆದ ಕರ್ತವ್ಯ ಮಿತಿ ಇರುತ್ತದೆ. ಆದರೆ ತಹಶೀಲ್ದಾರ್ ಹಾಗೂ ತಾಲ್ಲೂಕು ದಂಡಾಧಿಕಾರಿಗಳು ಹೊರಡಿಸುವ ಆದೇಶಗಳಿಗೆ ಕಾನೂನಿನ ಅಡಿಯಲ್ಲಿ ಎಷ್ಟು ಮಾನ್ಯತೆ ಎಂಬುದಾಗಿ ತಿಳಿದಿಲ್ಲ ಹಾಗೂ ನಿಯಮ 32ರಡಿ ತಹಶಿಲ್ದಾರ್ ಗ್ರೇಡ್ 2 ಹುದ್ದೆ ಹೊಂದಿರುವ ಅಧಿಕಾರಿಗಳು ತಹಶೀಲ್ದಾರ್ ಗ್ರೇಡ್-1 ಆಗಿ ನಿಯೋಜಿಸಲು ಸ್ಪಷ್ಟ ಕಾರಣ ತಿಳಿದು ಬಂದಿಲ್ಲ. ಹೀಗಿರುವುದರಿಂದ ರಾಜ್ಯದಲ್ಲಿ ಗ್ರೇಡ್-1 ಹಾಗೂ ಗ್ರೇಡ್-2 ತಹಶೀಲ್ದಾರ್ ರವರ ಕೊರತೆ ಎಷ್ಟಿದೆ ಎಂಬುದು ಸಹ ಸ್ಪಷ್ಟತೆ ಇಲ್ಲ. ಈ ಸಂಬಂಧ ಮಾನ್ಯ ಕಂದಾಯ ಸಚಿವರ ಬಳಿ ಪ್ರಸ್ತಾಪಿಸ ಬಯಸುತ್ತೇನೆ.

**ಉತ್ತರ:**

ತಹಶೀಲ್ದಾರ್ ಗ್ರೇಡ್-1 ಮತ್ತು ತಹಶೀಲ್ದಾರ್ ಗ್ರೇಡ್-2 ಹುದ್ದೆಗಳ ವೃಂದಬಲವನ್ನು ಸಮಗ್ರವಾಗಿ ಪರಿಷ್ಕರಣೆಗೆ ಒಳಪಡಿಸಲಾಗಿದ್ದು, ಕರಡು ವೃಂದಬಲವನ್ನು ಪ್ರಕಟಿಸಲಾಗಿದೆ. ಅಂತಿಮ ವೃಂದ ಬಲವನ್ನು ಅಧಿಸೂಚಿಸಲು ಕ್ರಮವಹಿಸಲಾಗುತ್ತಿದೆ.

ಪ್ರಸ್ತುತ ಕಂದಾಯ ಇಲಾಖೆಯಲ್ಲಿ 74 ತಹಶೀಲ್ದಾರ್ ಗ್ರೇಡ್-1 ಹುದ್ದೆಗಳು ಮಾತ್ರ ಭರ್ತಿ ಮಾಡಲಾಗಿದ್ದು, ಕೊರತೆಯಿರುವ ತಹಶೀಲ್ದಾರ್ ಗ್ರೇಡ್-1 ಹುದ್ದೆಗಳಿಗೆ ತಹಶೀಲ್ದಾರ್ ಗ್ರೇಡ್-2 ವೃಂದದ ಅಧಿಕಾರಿಗಳನ್ನು ಆಡಳಿತಾತ್ಮಕ ಹಿತದೃಷ್ಟಿಯಿಂದ ಸ್ಥಳ ನಿಯುಕ್ತಿಗೊಳಿಸಲಾಗಿರುತ್ತದೆ.

ಮಾನ್ಯ ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ ಹಾಗೂ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ಆದೇಶದಂತೆ ದಿನಾಂಕ:18.10.2024 ರಂದು ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾಗಿರುತ್ತದೆ. ಸದರಿ ಜೇಷ್ಠತಾ ಪಟ್ಟಿಯ ಬಗ್ಗೆ ಆಕ್ಷೇಪಣೆ/ ಸಲಹೆಗಳು ಸ್ವೀಕೃತವಾಗಿದ್ದು, ಸದರಿ ಆಕ್ಷೇಪಣೆ/ ಸಲಹೆಗಳನ್ನು ಸರ್ಕಾರವು ಪರಿಶೀಲಿಸಿ, ಅಂತಿಮಗೊಳಿಸಿದ ನಂತರ ತಹಶೀಲ್ದಾರ್ ಗ್ರೇಡ್-1 ಮತ್ತು ತಹಶೀಲ್ದಾರ್ ಗ್ರೇಡ್-2 ವೃಂದಕ್ಕೆ ಮುಂಬಡ್ತಿ ನೀಡುವ ಕುರಿತು ಪರಿಶೀಲಿಸಲಾಗುವುದು.

ಪ್ರಸ್ತುತ ಕಂದಾಯ ಇಲಾಖೆಯ ತಹಶೀಲ್ದಾರ್ ಗ್ರೇಡ್-2 ವೃಂದದ 51 ಹುದ್ದೆಗಳನ್ನು ನೇರ ನೇಮಕಾತಿಯಿಂದ ಭರ್ತಿ ಮಾಡಲು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಗೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ.

ಸಂಖ್ಯೆ:ಇ-ಆರ್‌ಡಿ 363 ಎಎಸ್‌ಡಿ 2024

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು